ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: :: 885 (842)
ಸದಸ್ಯರ ಹೆಸರು :: ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ :: 10.03.2021
ಉತ್ತರಿಸುವ ಸಚಿವರು :: ಕಂದಾಯ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಂದಾಯ ಇಲಾಖೆಯ ವತಿಯಿಂದ ಯಾವ ಯಾವ ಯೋಜನೆಗಳಿಗಾಗಿ ಭೂಮಿ ಹಂಚಿಕೆ ಮಾಡಲಾಗಿದೆ; (ವಿವರ ನೀಡುವುದು)	ಕಲಬುರಗಿ ಜಿಲ್ಲೆಯಲ್ಲಿ ಈ ಕೆಳಕಂಡ ಯೋಜನೆಗಳಿಗಾಗಿ ಸರ್ಕಾರಿ ಭೂಮಿಯನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮಾತ್ರ ಹಂಚಿಕೆ ಮಾಡಲಾಗಿದೆ. 1. ಸರ್ಕಾರಿ ಶಾಲೆ/ಹಾಸ್ಟೇಲ್‌ಗಳಿಗೆ 2. ಸಾರ್ವಜನಿಕ ಸ್ಮಶಾನ 3. ಘನ ಮತ್ತು ತ್ಯಾಜ್ಯ ವಿಲೇವಾರಿ ಘಟಕಕ್ಕೆ 4. ಸರ್ಕಾರಿ ಕಛೇರಿಗಳಿಗೆ (ಸಾರ್ವಜನಿಕ ಉದ್ದೇಶಗಳಿಗಾಗಿ ಭೂಮಿ ಹಂಚಿಕೆ ಮಾಡಲಾಗಿದೆ.) ಯಾದಗಿರಿ ಜಿಲ್ಲೆಯಲ್ಲಿ ಕೈಗಾರಿಕೆ ಉದ್ದೇಶಕ್ಕಾಗಿ ಕೆ.ಐ.ಎ.ಡಿ.ಬಿ ಕಲಬುರಗಿ, ಹಾಲು ಶೀಥಿಲೀಕರಣ ಘಟಕಕ್ಕಾಗಿ, ಪಶು ವಿಶ್ವವಿದ್ಯಾಲಯ, ಬೀದರ್ ಮತ್ತು ಯಾದಗಿರಿ ವೈದ್ಯಕೀಯ ಕಾಲೇಜು ನಿರ್ಮಾಣಕ್ಕಾಗಿ ಹಾಗೂ ಸರ್ಕಾರದ ವಿವಿಧ ಯೋಜನೆಗಳಾದ ವಸತಿ ನಿಲಯ, ಶಾಲೆ, ಆಸ್ಪತ್ರೆ, ವಿದ್ಯುತ್ ಉಪಕೇಂದ್ರ, ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣಕ್ಕಾಗಿ ಸಾರ್ವಜನಿಕ ರುದ್ರಭೂಮಿ, ನಿವೇಶನ ಯೋಜನೆಗಾಗಿ, ವಿಜ್ಞಾನ ಉಪಕೇಂದ್ರ, ಕೇಂದ್ರೀಯ ವಿದ್ಯಾಲಯ ಹಾಗೂ ಇತರೆ ಸಾರ್ವಜನಿಕ ಉದ್ದೇಶಗಳಿಗಾಗಿ ಭೂಮಿ ಹಂಚಿಕೆ ಮಾಡಲಾಗಿದೆ.
ಆ)	ಭೂ ಹಂಚಿಕೆ ಮಾಡಲು ಸರ್ಕಾರ ಅನುಸರಿಸುವ ಮಾನದಂಡಗಳೇನು; (ವಿವರ ನೀಡುವುದು)	ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 71 ಹಾಗೂ ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969 ರ ನಿಯಮಗಳನ್ವಯ ಮಂಜೂರಾತಿ ಮಾಡಲಾಗುತ್ತಿದೆ.
ಇ)	ಈ ಯೋಜನೆಗಳ ಜವಾಬ್ದಾರಿಯನ್ನು ನಿರ್ವಹಿಸುವ ಅಧಿಕಾರಿಯ ಕಾರ್ಯ ವ್ಯಾಪ್ತಿಗಳೇನು? (ವಿವರ ನೀಡುವುದು)	ಸದರಿ ಯೋಜನೆಯ ಜವಾಬ್ದಾರಿಯನ್ನು ಯಾವ ಇಲಾಖೆಗೆ ಹಂಚಿಕೆ ಮಾಡಲಾಗಿದೆಯೋ ಆ ಇಲಾಖೆಯ ಅಧಿಕಾರಿಗಳು ನಿರ್ವಹಿಸುತ್ತಾರೆ.

ಸಂಖ್ಯೆ:ಕಂಇ 19 ಎಲ್‌ಜಿಜಿ 2021

(ಆರ್.ಅಶೋಕ್)
ಕಂದಾಯ ಸಚಿವರು